ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಶಿಕ್ಷಕರ ಕೊರತೆ ಮತ್ತು ಅವ್ಯವಸ್ಥೆ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

61 (120) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವಾಗ ಶಿಕ್ಷಕರ ಹುದ್ದೆಯನ್ನು ಭರ್ತಿ ಮಾಡಿಕೊಳ್ಳಲಾಗುವುದು;

(ಆ) ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಆಟದ ಮೈದಾನ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮದ ವಿವರ ನೀಡುವುದು;

(ಇ) ಸರ್ಕಾರಿ ಶಾಲೆಗಳಿಗೆ ಸರ್ಕಾರ ಒದಗಿಸಿ ಕೊಡುವ ಪಠ್ಯ ಪುಸ್ತಕ ಶಾಲಾ ಸಮವಸ್ತ್ರ ಸರಿಯಾದ ಸಮಯಕ್ಕೆ ಮಕ್ಕಳಿಗೆ ತಲುಪದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು?